# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 946 |
| ಉತ್ತರಿಸಬೇಕಾದ ದಿನಾಂಕ | 11.03.2026 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಹತ್ತಿರ ಕೊಳಗೇರಿ ಪ್ರದೇಶದ ಬಡವರಿಗಾಗಿ ರೂ.58 ಕೋಟಿ ವೆಚ್ಚದಲ್ಲಿ 1000 ಮನೆಗಳು ನಿರ್ಮಾಣವಾಗಿ ಎರಡು ವರ್ಷ ಕಳೆದರೂ ಇನ್ನೂ ಹಂಚಿಕೆ ಮಾಡದಿರಲು ಕಾರಣಗಳೇನು; | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಪ್ರದೇಶದಲ್ಲಿ ರೂ. 55.78 ಕೋಟಿಗಳ ಯೋಜನಾ ವೆಚ್ಚದಲ್ಲಿ 1000 (ಜಿ+1) ಮನೆಗಳ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ. ಫಲಾನುಭವಿಗಳಿಗೆ ಈಗಾಗಲೇ ತಾತ್ಕಾಲಿಕ ಹಂಚಿಕೆ ಪತ್ರಗಳನ್ನು ವಿತರಿಸಲಾಗಿರುತ್ತದೆ ಹಾಗೂ ದಿನಾಂಕ:12.09.2025 ರಂದು ಲಾಟರಿ / Randomization ಮೂಲಕ ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ ರವರ ಅಧ್ಯಕ್ಷತೆಯಲ್ಲಿ ಮನೆಗಳನ್ನು ಹಂಚಿಕೆ ಮಾಡಲಾಗಿರುತ್ತದೆ. |
| (ಆ) | ರೂ.50-75 ಸಾವಿರ 7-8 ವರ್ಷಗಳ ಹಿಂದೆ ವಂತಿಗೆ ಹಣ ಕಟ್ಟಿದ ಪರಿಶಿಷ್ಟ ಜಾತಿ/ಪಂಗಡ ಮತ್ತು ಹಿಂದುಳಿದ ಕುಟುಂಬಗಳು ಕಾಯುತ್ತಿರುವುದಕ್ಕೆ ಸರ್ಕಾರ ಪರಿಹಾರ ಕೊಡುವುದೇ; | |
| ಇ) | 1000 ಮನೆಗಳು ನಿರ್ಮಾಣವಾಗಿದ್ದರೂ ಅದಕ್ಕೆ ಬೇಕಾದ ಮೂಲಭೂತ ಸೌಕರ್ಯ ಅಮೆಗತಿಯಲ್ಲಿ ನಡೆಯುತ್ತಿದ್ದು, ಮನೆಗಳು ಈಗಾಗಲೇ ಬಿರುಕು ಬಿಟ್ಟಿವೆ, ಮದ್ಯಪಾನ/ಜೂಜಾಟ ಮುಂತಾದ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದರೂ ಸರ್ಕಾರ ಮನೆಗಳನ್ನು ಹಂಚಿಕೆ ಮಾಡಲು ಹಿಂದೇಟು ಹಾಕಲು ಕಾರಣವೇನು; | ಈ ಯೋಜನೆಗೆ ಮಂಜೂರಾದ ಮೂಲಭೂತ ಸೌಕರ್ಯ ಕಾಮಗಾರಿಗಳು ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ. ಚಿತ್ತಾಪುರ ಪಟ್ಟಣದಲ್ಲಿ 1000 (ಜಿ+1) ನಿರ್ಮಿಸಿರುವ ಎಲ್ಲಾ ಮನೆಗಳು ಉತ್ತಮ ಸ್ಥಿತಿಯಲ್ಲಿರುತ್ತದೆ. |
| ಈ) | ಚುನಾವಣೆ ಹತ್ತಿರ ಬಂದಾಗ ಸ್ಥಳೀಯ ಜನಪ್ರತಿನಿಧಿಗಳು 1000 ಮನೆಗಳನ್ನು ಕಟ್ಟಿದೇವೆ ಎಂದು ರಾಜಕೀಯಕ್ಕಾಗಿ ಬಳಸಿಕೊಂಡು ಬಡವರಿಗೆ ಮೋಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಿನಾಂಕ:12.09.2025 ರಂದು ಲಾಟರಿ / Randomization ಮೂಲಕ ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ ರವರ ಅಧ್ಯಕ್ಷತೆಯಲ್ಲಿ ಮನೆಗಳನ್ನು ಹಂಚಿಕೆ ಮಾಡಲಾಗಿರುತ್ತದೆ. |
| ಉ) | ತಕ್ಷಣವೇ ಮೂಲಭೂತ ಸೌಕರ್ಯಗಳ ಕಾಮಗಾರಿಗಳನ್ನು ಮುಗಿಸಿ 7-8 ವರ್ಷಗಳಿಂದ ಮನೆಗಳಿಗಾಗಿ ಕಾಯುತ್ತಿರುವ ಬಡವರಿಗೆ ಮನೆಗಳನ್ನು ಹಂಚಿಕೆ ಹಂಚಲು ಸರ್ಕಾರ ಕ್ರಮ ಕೈಗೊಳ್ಳುವುದೆ? | |

ಸಂಖ್ಯೆ: ವಇ 37 ಹೆಚ್ಎಫ್ಎ 2026]

(ಬಿ.ಝಡ್ ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು.